ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಗೃಹ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 18/09/1

# ಪೊಲೀಸ್ ವೇತನ ಏರಿಕೆ ಜಾರಿಗೆ ದಿಢೀರ್ ತಡೆ

## ಪೊಲೀಸ್ ಪ್ರಧಾನ ಕಚೇರಿ ಸುತ್ತೋಲೆ

18/9/19

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಾಲ್ಕು ದಿನಗಳ ಹಿಂದೆ ಐಪಿಎಸ್ ಅಧಿಕಾರಿ ರಾಘವೇಂದ್ರ ಎಚ್.ಔರಾದ್ಕರ್ ವರದಿಯನ್ವಯ ಪೊಲೀಸರ ವೇತನ ಪರಿಷ್ಕರಣೆ ಮಾಡಿ ಹೊರಡಿಸಿದ್ದ ಆದೇಶಕ್ಕೆ ಮಂಗಳವಾರ ದಿಢೀರನೇ ರಾಜ್ಯ ಪೊಲೀಸ್ ಪ್ರಧಾನ ಕಚೇರಿ ಬ್ರೇಕ್ ಹಾಕಿದೆ.



ತಾವು ಮುಂದಿನ ಆದೇಶ ನೀಡುವ ವರೆಗೆ ಪೊಲೀಸರ ಪರಿಷ್ಕೃತ ವೇತನ ಜಾರಿಗೊಳಿಸದಂತೆ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ (ಆಡಳಿತ) ಡಾ.ಸಲೀಂ ಸುತ್ತೋಲೆ ಹೊರಡಿಸಿದ್ದಾರೆ.

ಪರಿಷ್ಕೃತ ವೇತನ ತಡೆಗೆ ಇಲಾಖೆ ನಿರ್ದಿಷ್ಟವಾದ ಕಾರಣ ನೀಡದ ಕಾರಣ ಪೊಲೀಸರಲ್ಲಿ ತೀವ್ರ ಅಸಮಾಧಾನ ಉಂಟಾಗಿದೆ. ಪೊಲೀಸರ ವೇತನ ಹೆಚ್ಚಳ ನಿರ್ಧಾರ ತೆಗೆದುಕೊಂಡ ಐಪಿಎಸ್ ಅಧಿಕಾರಿಗಳ ಕ್ರಮಕ್ಕೆ ಸರ್ಕಾರದ ಮಟ್ಟದಲ್ಲಿ ಐಎಎಸ್ ಸಮೂಹ ಆಕ್ಷೇಪ ವ್ಯಕ್ತಪಡಿಸಿದೆ ಎಂಬ ಮಾತುಗಳು ಕೇಳಿಬಂದಿವೆ.

ಈ ಬಗ್ಗೆ 'ಕನ್ನಡಪ್ರಭ' ಜತೆ ಮಾತನಾಡಿದ ಎಡಿಜಿಪಿ (ಆಡಳಿತ) ಸಲೀಂ ಅವರು, 'ವೇತನ ಪರಿಷ್ಕರಣೆ ಜಾರಿಗೆ ತಾಂತ್ರಿಕ ಆಡಚಣೆ ಎದುರಾಗಿದೆ. ಎಚ್ಆರ್ಎಂಎಸ್ ಮಾಹಿತಿ ಕ್ರೋಢೀಕರಿಸಿ ವೇತನ ಪರಿಷ್ಕರಣೆಗೊಳಿಸಬೇಕಿದೆ. ಈ ಪ್ರಕ್ರಿಯೆ 2-3 ದಿನಗಳಲ್ಲಿ ಪೂರ್ಣಗೊಳ್ಳಲಿದ್ದು, ಇದೇ ತಿಂಗಳಲ್ಲಿ ಹೊಸ ವೇತನ ಪೊಲೀಸರಿಗೆ ಸಿಗಲಿದೆ' ಎಂದರು.

ನೂತನ ವೇತನ ಸಂಬಂಧ ಸೆ.13ರಂದು ಡಿಜಿಪಿ ನೀಲಮಣಿ ಎನ್.ರಾಜು ಅಧಿಸೂಚನೆ ಹೊರಡಿಸಿದ್ದರು. ತಮ್ಮ ಬೇಡಿಕೆ ಈಡೇರಿದ್ದಕ್ಕೆ ಪೊಲೀಸರು ಸಹ ಖುಷಿಯಾಗಿದ್ದರು. ಪರಿಷ್ಕೃತ ವೇತನದಲ್ಲಿ ಸಬ್ ಇನ್ಸ್‌ಪೆಕ್ಟರ್ ಮತ್ತು ಡಿವೈಎಸ್ಪಿಗಳನ್ನು ಕೈಬಿಡಲಾಗಿತ್ತು. ಈ ತಾಂತ್ರಿಕ ತೊಂದರೆ ಸಹ ಪರಿಷ್ಕೃತ ವೇತನ ಆದೇಶ ಜಾರಿಗೆ ಅಡ್ಡಿಯಾಗಿದೆ ಎಂದು ತಿಳಿದು ಬಂದಿದೆ.

7